**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಗ್ಗಡದೇವನಕೋಟೆ**

# ಸಿ.ಸಿ.ನಂ.669/2017

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಶಿವರಾಮ | ಸಿ.ಡಬ್ಲ್ಯೂ-2 |
| ತಂದೆಯ ಹೆಸರು | : | ಈರನಾಯಕ | ಪಿ.ಡಬ್ಲ್ಯೂ-2 |
| ವಯಸ್ಸು | : | 41 ವರ್ಷ | - |
| ಉದ್ಯೋಗ | : | ಹೂವಿನ ವ್ಯಾಪಾರ | ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ 21.09.2024. |
| ವಾಸಸ್ಥಳ | : | ಚಾಮೇಗೌಡನಹುಂಡಿ ಗ್ರಾಮ | - |

**ಮುಖ್ಯ ವಿಚಾರಣೆಃ ಎಪಿಪಿ ರವರಿಂದಃ**

ಆರೋಪಿ ನನಗೆ ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯು ತಮ್ಮದೇ ಎಂದು ನೋಡಿ ಗುರುತಿಸುವಂತೆ ಹೇಳಿದ್ದು ಸಾಕ್ಷಿಯು ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2(ಬಿ)** ಎಂದು ಗುರುತಿಸಲಾಯಿತು. ಅಮಾನತ್ತು ಮಹಜರ್ ನಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಅಮಾನತ್ತು ಮಹಜರ್ ಮಾಡಿಲ್ಲ, ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಾನು ಸರಗೂರು ಪೊಲೀಸ್ ಠಾಣೆಯ ಪಕ್ಕದಲ್ಲಿ ಹೂವಿನ ವ್ಯಾಪಾರ ಮಾಡುತ್ತೇನೆ. ಪೊಲೀಸರು ನನ್ನನ್ನು ಕರೆದು ನನ್ನ ಸಹಿ ಪಡೆದಿರುತ್ತಾರೆ. ನಾನು ಸಹಿ ಮಾಡಿರುವ ದಾಖಲೆ ಏನು ಎಂದು ನನಗೆ ಗೊತ್ತಿಲ್ಲ. ಪೊಲೀಸರ ಮುಂದೆ ನಾನು ಯಾವುದೇ ಹೇಳಿಕೆ ನೀಡಿಲ್ಲ.

**ಪಾಟೀ ಸವಾಲುಃ ಎಪಿಪಿ ರವರಿಂದಃ**

ದಿಃ 20.12.2016 ರಂದು ಪೊಲೀಸರು ನನ್ನನ್ನು ಮತ್ತು ಚಾಸಾ3 ರವರನ್ನು ಪೊಲೀಸ್ ಠಾಣೆಗೆ ಕರೆಸಿ 90 ಎಂ.ಎಲ್ ನ ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 176 ಸಾರಾಯಿ ಪೌಚುಗಳನ್ನು ಮತ್ತು 90 ಎಂ.ಎಲ್ ನ ವಿಂಡ್ಸರ್ ಡೀಲಕ್ಸ್ ವಿಸ್ಕಿಯ 48 ಪೌಚುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅಮಾನತ್ತುಪಡಿಸಿಕೊಂಡ ಸಮಯದಲ್ಲಿ ನನ್ನ ಜೊತೆ ಚಾಸಾ3 ರವರು ಹಾಜರಿದ್ದು,

ಅಮಾನತ್ತು ಮಹಜರಿಗೆ ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನನ್ನ ಸಮಕ್ಷಮ ಅಮಾನತ್ತು ಮಹಜರ್ ಕ್ರಮ ಜರುಗಿಸಿದ್ದರೂ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ಓದಿ ಕೇಳಿಕೊಂಡ **ನಿಪಿ–3** ರಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(**ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು**)

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**